37

5

11/03/26

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀಯುತರುಗಳಾದ ಸೂರಜ್ ರೇವಣ್ಣ, ನಿರಾಣಿ ಹಣಮಂತ ರುದ್ರಪ್ಪ, ಎಸ್.ಎಲ್.ಭೋಜೇಗೌಡ, ನವೀನ್ ಕೆ.ಎಸ್ ಮತ್ತು ಪ್ರದೀಪ್ ಶೆಟ್ಟರ್ ಇವರು ನಿಯಮ 330ರ ಮೇರೆಗೆ ನೀಡಿರುವ ಗಮನಸೆಳೆಯುವ ಸೂಚನೆ ಉತ್ತರಿಸುವ ಬಗ್ಗೆ.**

**ಪ್ರಶ್ನೆ :** ರಾಜ್ಯದ ಬಯಲುನಾಡಿನ ಜಿಲ್ಲೆಗಳಾದ ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸುವ ವಿಚಾರ ಕುರಿತು

********

**ಉತ್ತರ :**

ರಾಜ್ಯದಲ್ಲಿ ಜೆಜೆಎಂ ಯೋಜನೆಯಡಿ ಎಲ್ಲಾ ಜಿಲ್ಲೆಗಳ ಗ್ರಾಮೀಣ ಜನವಸತಿಗಳಲ್ಲಿ ಕೊಳವೆಬಾವಿ ಜಲಮೂಲವನ್ನಾಗಿ ಪರಿಗಣಿಸಿ ಏಕ ಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಮತ್ತು ಭೂ ಮೇಲ್ಮೈ ಸುಸ್ಥಿರ ಜಲಮೂಲವನ್ನಾಧರಿಸಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿರುತ್ತದೆ. ಪ್ರಸ್ತುತ ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಸದರಿ ಯೋಜನೆಗಳಿಂದ ಕುಡಿಯುವ ನೀರನ್ನು ಒದಗಿಸಲಾಗುತ್ತಿರುತ್ತದೆ.

ಮುಂದುವರೆದು, ರಾಜ್ಯದ ಬಯಲುನಾಡಿನ ಜಿಲ್ಲೆಗಳಾದ ತುಮಕೂರು, ರಾಮನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳ ಜೊತೆಗೆ ಚಿಕ್ಕಮಗಳೂರು ಮತ್ತು ಹಾಸನ ಜಿಲ್ಲೆಗಳು ಒಳಗೊಂಡಂತೆ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯಿಂದ 24.01 ಟಿ.ಎಂ.ಸಿ ಪ್ರಮಾಣದ ನೀರು ಹಂಚಿಕೆಯಾಗಿರುತ್ತದೆ. ಈ ಪೈಕಿ ಗ್ರಾಮೀಣ ಜನವಸತಿಗಳಿಗೆ ಕುಡಿಯಲು 8.393 ಟಿ.ಎಂ.ಸಿ ನೀರು ಹಂಚಿಕೆಯಾಗಿರುತ್ತದೆ. ಸದರಿ ಯೋಜನೆಯನ್ನು ಜಲಸಂಪನ್ಮೂಲ ಇಲಾಖೆಯಡಿಯಲ್ಲಿ ಬರುವ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ಇವರಿಂದ ಅನುಷ್ಠಾನಗೊಳಿಸಲಾಗುತ್ತಿದೆ.

ಸದರಿ ಜಿಲ್ಲೆಗಳಲ್ಲಿ ಬರುವ ತಾಲ್ಲೂಕುಗಳಿಗೆ ಹಂಚಿಕೆಯಾಗಿರುವ ಕುಡಿಯುವ ನೀರನ್ನು ಸದ್ಬಳಕೆ ಮಾಡಿಕೊಳ್ಳುವ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ನೀರನ್ನು ಸಂಗ್ರಹಿಸಲು ಕೆರೆಗಳನ್ನು ಗುರುತಿಸಿ ಅಲ್ಲಿಂದ ನೀರನ್ನು ಶುದ್ಧಿಕರಿಸಿ ಗ್ರಾಮಿಣ ಜನವಸತಿಗಳಿಗೆ ನೀರನ್ನು ಸರಬರಾಜು ಮಾಡಲು ಯೋಜನೆಗಳನ್ನು ರೂಪಿಸಿ ಕಾರ್ಯಗತಗೊಳಿಸಬೇಕಾಗಿರುತ್ತದೆ.

ಮುಂದುವರೆದು, ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತ ರವರು ಸರ್ಕಾರದ ಮಟ್ಟದಲ್ಲಿ, ಅರಣ್ಯ ತೀರುವಳಿ ದೊರೆತಲ್ಲಿ, ತುಮಕೂರು ಜಿಲ್ಲಾ ವ್ಯಾಪ್ತಿಯ ಕಾಲುವೆ ನಿರ್ಮಾಣ ಕಾಮಗಾರಿಗಳನ್ನು ಜೂನ್ 2026 ರ ಅಂತ್ಯಕ್ಕೆ ಹಾಗೂ ಯೋಜನೆಯ ಎಲ್ಲಾ ಕಾಮಗಾರಿಗಳನ್ನು ಅಕ್ಟೋಬರ್ 2027ರ ಅಂತ್ಯಕ್ಕೆ ಪೂರ್ಣಗೊಳಿಸಿ ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಪೂರೈಸಲು ಯೋಜಿಸಲಾಗಿರುತ್ತದೆಂದು ತಿಳಿಸಿರುವ ಹಿನ್ನಲೆಯಲ್ಲಿ, ಈ ಇಲಾಖೆಯಿಂದ ತಾಲ್ಲೂಕುವಾರು ನೀರಿನ ಅಗತ್ಯತೆ ಅನುಸಾರ ಗ್ರಾಮೀಣ ಜನವಸತಿಗಳಿಗೆ ಕುಡಿಯುವ ನೀರನ್ನು ಒದಗಿಸಲು ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಪ್ರಾಥಮಿಕ ಯೋಜನಾ ವರದಿ (PSR) ಗಳನ್ನು ತಯಾರಿಸಲು ಅನುಮೋದನೆ ನೀಡಲಾಗಿರುತ್ತದೆ. ತದನಂತರ ಅನುದಾನ ಲಭ್ಯತೆ ಅನುಸಾರ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳಬೇಕಿದೆ.

***ಸಂ:ಗ್ರಾಕುನೀ&ನೈಇ/ಮುಇಂ/ತಾಂತ್ರಿಕ/165/2025-26***

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು